ವೈದ್ಯಾಧಿಕಾರಿಗಳ ನೇಮಕ

3259 (3408); ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ಮತಕ್ಷೇತ್ರದ ಶಿರಹಟ್ಟಿ, ಲಕ್ಷ್ಮೇಶ್ವರ ಹಾಗೂ ಮುಂಡರಗಿ ಸರ್ಕಾರಿ ಆಸ್ಪತ್ರೆಗಳಿಗೆ ಒಟ್ಟು ಎಷ್ಟು ಹುದ್ದೆಗಳು ಮಂಜೂರಾಗಿವೆ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು;

ಆ) ಜನಸಂಖ್ಯೆಗನುಗುಣವಾಗಿ ವೈದ್ಯಾಧಿಕಾರಿಗಳ ಸೇವೆಯು ಲಭ್ಯವಿದೆಯೇ;

ಇ) ಹಾಗಿಲ್ಲದಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗೆ ಬರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ)

	ಮಂಜೂರು	ಕಾರ್ಯನಿರತ	ಖಾಲಿ
ಸಾರ್ವಜನಿಕ ಆಸ್ಪತ್ರೆ, ಶಿರಹಟ್ಟಿ	– 74	39	35
ಸ.ಆ.ಕೇಂದ್ರ, ಲಕ್ಷ್ಮೇಶ್ವರ	– 30	18	12
ಸಾರ್ವಜನಿಕ ಆಸ್ಪತ್ರೆ, ಮುಂಡರಗಿ	– 80	30	50

ಆ) ಜನಸಂಖ್ಯೆಗನುಗುಣವಾಗಿ ವೈದ್ಯಾಧಿಕಾರಿಗಳ ಸೇವೆಯು ಲಭ್ಯವಿರುವುದಿಲ್ಲ.

ಇ) ಬಂದಿದೆ.

ಆದರೆ, ಇರುವ ವೈದ್ಯರುಗಳಿಂದಲೇ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.

ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ 983 ತಜ್ಞ ವೈದ್ಯರು, 331 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, 87 ದಂತ ಆರೋಗ್ಯಾಧಿಕಾರಿಗಳ ನೇಮಕಾತಿಯನ್ನು ವಿಶೇಷ ನಿಯಮಗಳನ್ನು ರೂಪಿಸಿ, ಯಾವುದೇ ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನವಿಲ್ಲದೇ, ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡುವ ಪ್ರಸ್ತಾವನೆಯನ್ನು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸಲ್ಲಿಸಲಾಗಿದೆ. ಆಯೋಗವು ಈ ವಿಶೇಷ ನಿಯಮಗಳ ರೀತ್ಯಾ 2–3 ತಿಂಗಳೊಳಗಾಗಿ ಆಯ್ಕೆ ಮಾಡಿ, ಆಯ್ಕೆ ಪಟ್ಟಿಯನ್ನು ಒದಗಿಸುವುದಾಗಿ ತಿಳಿಸಿರುತ್ತದೆ. ಗ್ರಾಮೀಣ ಪ್ರದೇಶದಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಹಾಗೂ ಗೌರವಧನದ ಆಧಾರದ ಮೇಲೆ ನಿವೃತ್ತ ತಜ್ಞ ವೈದ್ಯರುಗಳನ್ನು ನೇಮಕ ಮಾಡಲು ಆಯಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇಲಾಖೆಯಲ್ಲಿ 1582 ಗ್ರೂಪ್–ಡಿ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ ಹಾಗೂ 436 ವಾಹನ ಚಾಲಕರ ಹುದ್ದೆಗಳನ್ನು ನೇಮಕಾತಿ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.

ಇನ್ನು ಖಾಲಿಯಿರುವ ವಿವಿಧ ವೃಂದಗಳ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ವಿವಿಧ ಹಂತಗಳಲ್ಲಿ ಪರಿಶೀಲನೆಯಲ್ಲಿದೆ.